ವಿಧಾನಸಭಾ ಸದಸ್ಯರಾದ ಶ್ರೀ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ.1283ಕ್ಕೆ ಉತ್ತರ

ಉತ್ತರಿಸಬೇಕಾದ ದಿನಾಂಕ 24.03.2016

| ಕ್ರ. ಸಂ. | ಪ್ರಶ್ನೆ | ಉತರ |
|---|---|---|
| ಅ) | ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು; (ಯಾವುವು ವಿವರ ನೀಡುವುದು); | ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಒಟ್ಟು 57 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ.<br><br>ವಿದ್ಯಾರ್ಥಿನಿಲಯಗಳ ವಿವರಗಳನ್ನು **ಅನುಬಂಧ-1**ರಲ್ಲಿ ನೀಡಲಾಗಿದೆ. |
| ಆ) | ಪ್ರಸ್ತುತ ಎಷ್ಟು ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ; (ವಿವರ ನೀಡುವುದು) | ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟು 27 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.<br><br>ವಿವರಗಳನ್ನು **ಅನುಬಂಧ-2**ರಲ್ಲಿ ನೀಡಲಾಗಿದೆ. |
| ಇ) | ಕಳೆದ ಮೂರು ವರ್ಷಗಳಿಂದ ಹಿಂದುಳಿದ ವರ್ಗಗಳ ಇಲಾಖೆಯ ವಿದ್ಯಾರ್ಥಿನಿಲಯಗಳ ಕಟ್ಟಡಗಳ ದುರಸ್ಥಿಗೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕೈಗೊಂಡಿರುವ ಕ್ರಮಗಳೇನು; (ತಾಲ್ಲೂಕುವಾರು ನೀಡುವುದು); | ಕಳೆದ ಮೂರು ವರ್ಷಗಳಿಂದ ಚಿಕ್ಕಬಳ್ಳಾಪುರ ಜಿಲ್ಲೆಯ ಹಿಂದುಳಿದ ವರ್ಗಗಳ ಇಲಾಖೆಯ ವಿದ್ಯಾರ್ಥಿನಿಲಯಗಳ ಕಟ್ಟಡಗಳ ದುರಸ್ಥಿಗೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕೈಗೊಂಡಿರುವ ಕ್ರಮಗಳ ತಾಲ್ಲೂಕುವಾರು ವಿವರಗಳನ್ನು **ಅನುಬಂಧ-3**ರಲ್ಲಿ ನೀಡಲಾಗಿದೆ. |
| ಈ) | ಹಾಗಿದ್ದಲ್ಲಿ ಹೊಸ ವಿದ್ಯಾರ್ಥಿನಿಲಯದ ಕಟ್ಟಡಗಳನ್ನು ನಿರ್ಮಾಣ ಮಾಡಲು ಕೈಗೊಂಡ ಕ್ರಮಗಳೇನು: (ವಿವರ ನೀಡುವುದು)? | 2014-15ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು, ಶಿಡ್ಲಘಟ್ಟ, ಗುಡಿಬಂಡೆ ಮತ್ತು ಬಾಗೇಪಲ್ಲಿ ಟೌನ್‌ನಲ್ಲಿ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 4 ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯಗಳ ಕಟ್ಟಡ ಕಾಮಗಾರಿಗೆ ಪ್ರತಿ ವಿದ್ಯಾರ್ಥಿನಿಲಯಕ್ಕೆ ರೂ.2.00/- ಕೋಟಿಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಪ್ರಥಮ ಕಂತಾಗಿ ಪ್ರತಿ ವಿದ್ಯಾರ್ಥಿನಿಲಯಕ್ಕೆ ರೂ.1.00/- ಕೋಟಿಯಂತೆ ರೂ.4.00/- ಕೋಟಿಗಳನ್ನು ಬಿಡುಗಡೆ ಮಾಡಿದ್ದು, ಶಿಡ್ಲಘಟ್ಟ ಮತ್ತು ಗೌರಿಬಿದನೂರು ತಾಲ್ಲೂಕಿನಲ್ಲಿ ಕಾಮಗಾರಿ ಪ್ರಾರಂಭಿಸಲಾಗಿದೆ.<br><br>ಚಿಂತಾಮಣಿ ಟೌನ್‌ನಲ್ಲಿ ಮೆಟ್ರಿಕ್-ನಂತರದ ಬಾಲಕರ ವಿದ್ಯಾರ್ಥಿನಿಲಯ ಮತ್ತು ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಕಾರ್ಯ ಮುಕ್ತಾಯ ಹಂತದಲ್ಲಿದ್ದು, ಶೀಘ್ರದಲ್ಲೇ ಇಲಾಖಾ ವಶಕ್ಕೆ ಪಡೆಯಲಾಗುವುದು. |

ಆಯುಕ್ತರ ಪರವಾಗಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು